(23)

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬೃ.ಬೆಂ.ಮ.ಪಾ/ಅ.ಆ/ಯ.ವ/ಆ.ಅ/923/2013–14.

ಅಪರ ಆಯುಕ್ತರವರ ಕಛೇರಿ
ಯಲಹಂಕ ವಲಯ, ಬೃ.ಬೆಂ.ಮ.ಪಾಲಿಕೆ,
ಬೆಂಗಳೂರು –92
ದಿನಾಂಕ: 26-02-2014

ಆಡಳಿತಾತ್ಮಕ ಅನುಮೋದನೆ

ವಿಷಯ: Vidyaranayapura suvarna Mahotsava Playground fencing and Development works in ward No 09 of Vidyaranyapura sub Division.

ಉಲ್ಲೇಖ: 1. ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ , ಕಾಮಗಾರಿ ಸಂಕೇತ: 009-14-000060

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರು **2013–14ನೇ** ಸಾಲಿನ **ಕೆ.ಪಿ.ಡಬ್ಲ್ಯೂ.ಡಿ. ಎಸ್.ಆರ್** ದರಪಟ್ಟಿಯನ್ವಯ, 2013–14ನೇ ಸಾಲಿನ ಲೆಕ್ಕಶೀರ್ಷಿಕೆ ಪಿ–0190ಪೂಜ್ಯ ಮಹಾಪೌರರು ಆಜ್ಞೆ ಮಾಡುವ ವಿಶೇಷ ಕಾಮಗಾರಿಗಳ ಅನುದಾನದಡಿಯಲ್ಲಿ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು **ರೂ. 20.00** ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಸದರಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011–12 ದಿನಾಂಕ: 25–02–2013ರಲ್ಲಿ ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕ ಪುಟ ಸಂಖ್ಯೆ: 117 ಕ್ರ.ಸಂ: 923 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
6. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
7. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ–ಬಿಎಂ–ಬಿಸಿ /WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಅಪರ ಆಯುಕ್ತರು,
ಯಲಹಂಕ ವಲಯ,
ಬೃ.ಬೆ.ಎಂ.ಪಿ. ಬೆಂಗಳೂರು–92

ಅಪರ ಆಯುಕ್ತರು
ಯಲಹಂಕ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಬ್ಯಾಟರಾಯನಪುರ, ಬೆಂಗಳೂರು-92

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
2. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ, ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.